**All India Radio: Bangalore**
**National Bulletin In Kannada**
**08.05.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**<><*<><>*><>**

<u>ಮುಖ್ಯಾಂಶಗಳು</u>

**೧. ಆಪರೇಷನ್ ’ಸಿಂದೂರ’ ಕಾರ್ಯಾಚರಣೆ, ದೇಶಕ್ಕೆ ಹೆಮ್ಮೆಯ ವಿಷಯ- ರಕ್ಷಣಾ ಸಚಿವ ರಾಜನಾಥ್ ಸಿಂಗ್**

**೨. ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ ಮಾಡಿದ ಇರಾನ್ ವಿದೇಶಾಂಗ ಸಚಿವ**

**೩. ಪಾಕಿಸ್ತಾನ ಜಾಗತಿಕ ಭಯೋತ್ಪಾದನೆಯ ಕೇಂದ್ರ - ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ**

**೪. ಐಪಿಎಲ್ ಟಿ-ಕ್ರಿಕೆಟ್; ಪಂಜಾಬ್ ಕಿಂಗ್ಸ್ - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ**

**<><*<><>*><>**

ಪಾಕಿಸ್ತಾನ ಹಾಗೂ ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿ ಹೆಚ್ಚಿನ ಸಂಖ್ಯೆ ಭಯೋತ್ಪಾದಕರ ಹತ್ಯೆಗೆ ಕಾರಣವಾದ ಆಪರೇಷನ್ ಸಿಂದೂರ ಕಾರ್ಯಾಚರಣೆಗೆ ಭಾರತೀಯ ಸಶಸ್ತ್ರ ಪಡೆಗಳು ಉತ್ತಮ ಗುಣಮಟ್ಟದ ಉಪಕರಣಗಳನ್ನು ಬಳಸಿವೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದ್ದಾರೆ. ಪಾಕಿಸ್ತಾನ ಹಾಗೂ ಪಾಕ್ ಆಕ್ರಮಿತ ಕಾಶ್ಮೀರ ಪ್ರದೇಶದಲ್ಲಿನ ಭಯೋತ್ಪಾದಕ ಶಿಬಿರಗಳನ್ನು ಸಶಸ್ತ್ರ ಪಡೆಗಳು ನಾಶಪಡಿಸಿದ ರೀತಿ ದೇಶಕ್ಕೆ ಹೆಮ್ಮೆಯ ವಿಷಯವಾಗಿದೆ ಎಂದು ಅವರು ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ರಾಷ್ಟ್ರೀಯ ಗುಣಮಟ್ಟ ಸಮಾವೇಶದಲ್ಲಿ ಮಾತನಾಡಿದ ರಕ್ಷಣಾ ಸಚಿವರು, ಸೇನಾ ಕಾರ್ಯಾಚರಣೆಯಲ್ಲಿ ದೇಶದ ಸಶಸ್ತ್ರ ಪಡೆಗಳು ಪ್ರದರ್ಶಿಸಿದ ಧೈರ್ಯ ಹಾಗೂ ಶೌರ್ಯವನ್ನು ಅಭಿನಂದಿಸಿದರು. ಯಾವುದೇ ಜನಸಾಮಾನ್ಯರು, ಮುಗ್ಧರಿಗೆ ಹಾನಿಯಾಗದಂತೆ ಈ ಕಾರ್ಯಾಚರಣೆಯನ್ನು ನಡೆಸಲಾಗಿದೆ ಎಂದು ರಾಜನಾಥ್ ಸಿಂಗ್ ಸ್ಪಷ್ಟಪಡಿಸಿದರು. ಭಾರತದ ಸಾರ್ವಭೌಮತ್ವವನ್ನು ರಕ್ಷಿಸುವಲ್ಲಿ ಯಾವುದೇ ಇತಿ-ಮಿತಿ ಸರ್ಕಾರಕ್ಕೆ ಅಡ್ಡಿಯಾಗುವುದಿಲ್ಲ ಎಂದು ರಕ್ಷಣಾ ಸಚಿವರು ದೇಶವಾಸಿಗಳಿಗೆ ಭರವಸೆ ನೀಡಿದ್ದಾರೆ. ಭವಿಷ್ಯದಲ್ಲಿಯೂ ಇಂತಹ ಜವಾಬ್ದಾರಿಯುತ ಪ್ರತಿಕ್ರಿಯೆಗಳಿಗೆ ಭಾರತ ಸಂಪೂರ್ಣವಾಗಿ

ಸಿದ್ಧವಾಗಿದೆ ಎಂದು ಘೋಷಿಸಿದ್ದಾರೆ. ಭಾರತದಲ್ಲಿ ವೃದ್ಧಿಯಾಗುತ್ತಿರುವ ರಕ್ಷಣಾ ಕೈಗಾರಿಕಾ ಜಗತ್ತು ಭಾರತಕ್ಕೆ ಅಭೂತಪೂರ್ವ ಶಕ್ತಿಯನ್ನು ಒದಗಿಸುತ್ತದೆ ಎಂದು ಹೇಳಿದರು. ಭಾರತದ ರಕ್ಷಣಾ ವಲಯದ ರಫ್ತು ಸುಮಾರು ೨೪ ಸಾವಿರ ಕೋಟಿ ರೂಪಾಯಿಗಳ ದಾಖಲೆಯ ಅಂಕಿಯನ್ನು ದಾಟಿದೆ. ೨೦೨೯ರ ವೇಳೆಗೆ ರಕ್ಷಣಾ ರಫ್ತುಗಳನ್ನು ೫೦ ಸಾವಿರ ಕೋಟಿ ರೂಪಾಯಿಗಳಿಗೆ ಹೆಚ್ಚಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹೇಳಿದರು.

**<><*<><>*><>**

ಪ್ರಸ್ತುತ ಭಾರತ ಭೇಟಿಯಲ್ಲಿರುವ ಇರಾನ್ ವಿದೇಶಾಂಗ ಸಚಿವ ಡಾ.ಅಬ್ಬಾಸ್ ಅರಗ್ಚಿ ಅವರು ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಿದರು. ಈ ಸಂದರ್ಭದಲ್ಲಿ ರಾಷ್ಟ್ರಪತಿ ಮುರ್ಮು ಅವರು ಚಾಬಾಹಾರ್ ಬಂದರಿನ ಸಂಪೂರ್ಣ ಸಾಮರ್ಥ್ಯ ಅರಿತುಕೊಳ್ಳುವಲ್ಲಿ ಎರಡು ದೇಶಗಳ ನಡುವಿನ ಸಹಕಾರವನ್ನು ಸ್ವಾಗತಿಸಿದರು.

ಉಭಯ ದೇಶಗಳು ದೀರ್ಘಕಾಲದ ಸ್ನೇಹವನ್ನು ಉಳಿಸಿಕೊಂಡಿರುವುದಲ್ಲದೇ, ಪ್ರಾದೇಶಿಕ ಶಾಂತಿ ಹಾಗೂ ಸಮೃದ್ಧಿಗಾಗಿ ಒಟ್ಟಾಗಿ ಕೆಲಸ ಮಾಡುತ್ತಿವೆ ಎಂದು ಒತ್ತಿ ಹೇಳಿದರು. ಈ ಭೇಟಿ ಭಾರತ-ಇರಾನ್ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ರಾಷ್ಟ್ರಪತಿ ವಿಶ್ವಾಸ ವ್ಯಕ್ತಪಡಿಸಿದರು. ಇರಾನ್ ವಿದೇಶಾಂಗ ಸಚಿವ ಡಾ.ಅರಗ್ಚಿ ಅವರ ಭೇಟಿ ಎರಡು ದೇಶಗಳ ನಡುವಿನ ರಾಜತಾಂತ್ರಿಕ ಸಂಬಂಧಗಳ ೭೫ನೇ ವಾರ್ಷಿಕೋತ್ಸವ ವಿಶೇಷ ಸಂದರ್ಭದಲ್ಲಿ ನಡೆಯುತ್ತಿದೆ ಎಂದು ರಾಷ್ಟ್ರಪತಿ ನುಡಿದರು. ಎರಡೂ ದೇಶಗಳ ದ್ವಿಪಕ್ಷೀಯ ಸಂಬಂಧಗಳು ನಿಯಮಿತವಾಗಿ ಉನ್ನತಮಟ್ಟದ ವಿನಿಮಯದ ಬಲಿಷ್ಠ ಅಡಿಪಾಯದ ಮೇಲೆ ನಿರ್ಮಿತವಾಗಿದೆ ಎಂದು ರಾಷ್ಟ್ರಪತಿಗಳು ವಿಶ್ಲೇಷಿಸಿದರು. ಈ ೭೫ ವರ್ಷಗಳಲ್ಲಿ ಉಭಯ ದೇಶಗಳ ನಡುವಿನ ಸಂಬಂಧಗಳು ಎರಡು ರಾಷ್ಟ್ರಗಳ ನಡುವಣ ಸಾಂಸ್ಕೃತಿಕ ಸಹಕಾರ, ವ್ಯಾಪಾರ, ಇಂಧನ ಪಾಲುದಾರಿಕೆ ಪ್ರಾದೇಶಿಕ ಮತ್ತು ಜಾಗತಿಕ ವೇದಿಕೆಗಳಲ್ಲಿ ಇತರರೊಂದಿಗೆ ಕಾರ್ಯತಂತ್ರದ ಸಮನ್ವದಂತಹ ವೈವಿದ್ಯಮಯ ಕ್ಷೇತ್ರಗಳಲ್ಲಿ ಬೆಳೆದಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ವಿವರಿಸಿದ್ದಾರೆ. ಭಾರತ- ಇರಾನ್ ನಡುವಿನ ಸಂಬಂಧಗಳು ಸಾವಿರಾರು ವರ್ಷಗಳಷ್ಟು ಹಿಂದಿನವು. ಕಲೆ ಮತ್ತು ಸಂಸ್ಕೃತಿ, ಭಾಷೆ, ಸಾಹಿತ್ಯ, ಸಂಗೀತ ಹಾಗೂ ಆಹಾರ ಪ್ರತಿಯೊಂದು ಅಂಶದಲ್ಲೂ ಎರಡು ದೇಶಗಳ ಪರಂಪರೆಯಲ್ಲಿ ಕಾಣಬಹುದಾಗಿದೆ ಎಂದು ರಾಷ್ಟ್ರಪತಿಯವರು ಹೇಳಿದ್ದಾರೆ.

<><*<><>*><>

ಜಗತ್ತಿನೆಲ್ಲೆಡೆ ನಡೆಯುತ್ತಿರುವ ವಿವಿಧ ಭಯೋತ್ಪಾದಕ ದಾಳಿಗಳ ಬೇರುಗಳು ಪಾಕಿಸ್ತಾನದಲ್ಲಿದ್ದು, ಪಾಕಿಸ್ತಾನ ಜಾಗತಿಕ ಭಯೋತ್ಪಾದನೆಯ ಕೇಂದ್ರ ಎಂಬ ಖ್ಯಾತಿಯನ್ನು ಪಡೆದುಕೊಂಡಿದೆ ಎಂದು ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಹೇಳಿದ್ದಾರೆ. ನವದೆಹಲಿಯಲ್ಲಿ ಸಂಜೆ ಮಾಧ್ಯಮಗಳೊಂದಿಗೆ ಮಾತನಾಡಿದ ವಿದೇಶಾಂಗ ಕಾರ್ಯದರ್ಶಿ ಮಿಸ್ರಿ, ಪಾಕಿಸ್ತಾನದ ಯಾವುದೇ ಮುಂದಿನ ಕ್ರಮಗಳು ಆ ದೇಶಾದ ಪರಿಸ್ಥಿತಿಯನ್ನು ಮತ್ತಷ್ಟು ಉಲ್ಬಣಗೊಳಿಸಲಿವೆ ಎಂದು ವಿಶ್ಲೇಷಿಸಿದ ಅವರು, ಪಾಕಿಸ್ತಾನದ ಕ್ರಮಗಳಿಗೆ ಭಾರತ ಸೂಕ್ತವಾಗಿ ಪ್ರತಿಕ್ರಿಯಿಸಲಾಗುವುದು ಎಂದರು. ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತ ಪ್ರತಿಕ್ರಿಯೆ ನೀಡಿದ್ದು, ಇದು ಪರಿಸ್ಥಿತಿಯ ಉಲ್ಬಣಕ್ಕೆ ಕಾರಣವಾಗಿದೆ ಎಂದರು. ವಿಶ್ವಸಂಸ್ಥೆಯ ಭದ್ರತಾಮಂಡಳಿಯಲ್ಲಿ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಬಗ್ಗೆ ಮಾತುಕತೆ ನಡೆಯುತ್ತಿರುವಾಗ ದಾಳಿಯಲ್ಲಿ ಪಾಕಿಸ್ತಾನ 'ದಿ ರೆಸಿಸ್ಟೆನ್ಸ್ ಫ್ರಂಟ್ ಟಿಆರ್‌ಎಫ್' ಪಾತ್ರವಿಲ್ಲ ಎಂದು ಹೇಳಿತ್ತು. ಟಿಆರ್‌ಎಫ್ ಭಯೋತ್ಪಾದಕ ದಾಳಿಯನ್ನು ಎರಡು ಬಾರಿ ತನ್ನದೆಂದು ಹೇಳಿಕೊಂಡ ಮೇಲೆಯೂ ಪಾಕಿಸ್ತಾನ ಅದನ್ನು ಸಮರ್ಥಿಸಿಕೊಳ್ಳಲು ಯತ್ನಿಸಿತು. ಒಸಮಾ ಬಿನ್ ಲಾಡೆನ್ ಪಾಕಿಸ್ತಾನದಲ್ಲಿ ಪತ್ತೆಯಾಗಿದ್ದ. ಪಾಕಿಸ್ತಾನ ಜಾಗತಿಕ ಭಯೋತ್ಪಾದನೆಯ ಕೇಂದ್ರಬಿಂದು ಎಂಬ ಖ್ಯಾತಿಯನ್ನು ಹೊಂದಿದೆ ಎಂದು ಹೇಳಿದರು. ಪಾಕಿಸ್ತಾನ ಲಷ್ಕರಿ-ಇ-ತೈಬಾ, ಜೈಶಿ ಮೊಹಮ್ಮದ್ ಸೇರಿದಂತೆ ವಿಶ್ವಸಂಸ್ಥೆ ಹೆಸರಿಸಿರುವ ಹಲವು ಭಯೋತ್ಪಾದಕ ಗುಂಪುಗಳಿಗೆ ನೆಲೆಯಾಗಿದೆ ಎಂದು ಆರೋಪಿಸಿದರು. ಆಪರೇಷನ್ ಸಿಂದೂರ ಕಾರ್ಯಾಚರಣೆಯಲ್ಲಿ ಹತ್ಯೆಗೀಡಾದ ಭಯೋತ್ಪಾದಕರಿಗೆ ಪಾಕಿಸ್ತಾನ ಸರ್ಕಾರಿ ಅಂತ್ಯಕ್ರಿಯೆ ನಡೆಸಿರುವ ಚಿತ್ರವನ್ನು ಸಹ ಅವರು ವಿದೇಶಾಂಗ ಕಾರ್ಯದರ್ಶಿ ಮಾಧ್ಯಮಗಳಿಗೆ ಪ್ರದರ್ಶಿಸಿದರು.

<><*<><>*><>

ಡಾ.ಅರವಿಂದ್ ಪನಗಾರಿಯಾ ನೇತೃತ್ವದ ಭಾರತದ ೧೬ನೇ ಹಣಕಾಸು ಆಯೋಗ, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಉಪ ಮುಖ್ಯಮಂತ್ರಿಗಳಾದ ಏಕನಾಥ್ ಶಿಂಧೆ ಹಾಗೂ ಅಜಿತ್ ಪವಾರ್ ಅವರನ್ನು ಮುಂಬೈನಲ್ಲಿಂದು ಭೇಟಿ ಮಾಡಿ ಸಭೆ ನಡೆಸಿತು. ಸಭೆಯ ನಂತರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಆಯೋಗದ ಅಧ್ಯಕ್ಷ ಡಾ.ಅರವಿಂದ್ ಪನಗಾರಿಯಾ, ಮಹಾರಾಷ್ಟ್ರ ಕನಿಷ್ಠ ವಿತ್ತೀಯ ಕೊರತೆಯೊಂದಿಗೆ ಸಾಂಪ್ರದಾಯಿಕ ಹಣಕಾಸು ನೀತಿ ಪಾಲಿಸುತ್ತಿದ್ದು, ಸಾಲದ ಪ್ರಮಾಣ ಕೇಂದ್ರ ನಿಗದಿಪಡಿಸಿದ ಮಿತಿಯೊಳಗಿದೆ, ರಾಜ್ಯದ ಆರ್ಥಿಕ ಆರೋಗ್ಯ ಬಲಿಷ್ಠವಾಗಿದೆ ಎಂದು ಹೇಳಿದರು.

ಮಹರಾಷ್ಟ್ರ ಸರ್ಕಾರ ಮಂಡಿಸಿರುವ ಪ್ರಮುಖ ಸಲಹೆಗಳ ಕುರಿತು ಪ್ರಸ್ತಾಪಿಸಿದ ಡಾ.ಪನಗಾರಿಯಾ, ರಾಜ್ಯಗಳಿಗೆ ಕೇಂದ್ರ ತೆರಿಗೆಗಳ ವಿಕೇಂದ್ರಿಕರಣವನ್ನು ಶೇಕಡ ೫೦ ರಷ್ಟು ಸಮನಾಂತರವಾಗಿ ಹೆಚ್ಚಿಸುವಂತೆ ಆಯೋಗವನ್ನು ಒತ್ತಾಯಿಸಿದೆ. ಸಾರ್ವಜನಿಕ ಸೇವೆಗಳನ್ನು ಕಲ್ಪಿಸುವಲ್ಲಿ ರಾಜ್ಯ ಸರ್ಕಾರಗಳ ಹೆಚ್ಚುತ್ತಿರುವ ಜವಬ್ದಾರಿಗಳನ್ನು ಇದು ತೋರಿಸುತ್ತದೆ ಎಂದು ಅವರು ಹೇಳಿದರು. ತೆರಿಗೆ ವಿಕೇಂದ್ರಿಕರಣ ಸೂತ್ರದಲ್ಲಿ ಜನಸಂಖ್ಯೆಗೆ ಅನುಸಾರ ಶೇಕಡ ೨೦ ರಷ್ಟು ಹೆಚ್ಚಿಸಬೇಕೆಂದು ರಾಜ್ಯವು ಶಿಫಾರಸು ಮಾಡಿದೆ. ನಗರ ಹಾಗೂ ಗ್ರಾಮೀಣಪ್ರದೇಶಗಳಿಗೆ ನಿಧಿ ಹಂಚಿಕೆಯ ಮೇಲೆ ಸ್ಪಷ್ಟ ವ್ಯತ್ಯಾಸವನ್ನು ತೋರಿಸಬೇಕೆಂದು ಮನವಿ ಮಾಡಿದೆ. ಮುಂಬೈ ಮಹಾನಗರ ಪ್ರದೇಶದ ಅಭಿವೃದ್ಧಿಗೆ ಹೆಚ್ಚಿನ ಹಣಕಾಸು ಒದಗಿಸುವುದು ಹಾಗೂ ಈ ಪ್ರದೇಶದಲ್ಲಿ ಮೂಲಸೌಕರ್ಯ ಬೆಳವಣಿಗೆಗೆ ಬೆಂಬಲ ನೀಡಲು ೫೦ ಸಾವಿರ ಕೋಟಿ ರೂಪಾಯಿಗಳ ವಿಶೇಷ ಹಂಚಿಕೆ ಮಾಡಬೇಕೆಂದು ರಾಜ್ಯ ಸರ್ಕಾರದ ಪ್ರಮುಖ ಬೇಡಿಕೆಯಾಗಿದೆ ಎಂದು ಅವರು ವಿವರಿಸಿದರು. ಕೇಂದ್ರ ಹಣಕಾಸು ಆಯೋಗವು, ರಾಜ್ಯದ ಹಣಕಾಸಿನ ಅವಶ್ಯಕತೆಗಳನ್ನು ನಿರ್ಣಯಿಸಲು, ನಿಧಿ ಹಂಚಿಕೆಗೆ ಸಂಬಂಧಿಸಿದಂತೆ ಪ್ರಮುಖ ಪಾಲುದಾರರೊಂದಿಗೆ ಸಮಾಲೋಚನೆ ನಡೆಸಲು ಪ್ರಸ್ತುತ ಎರಡು ದಿನಗಳ ಮಹಾರಾಷ್ಟ್ರ ಭೇಟಿಯಲ್ಲಿದೆ. ೨೦೨೬ ರಿಂದ ಆರಂಭಗೊಳ್ಳುವ ಐದು ವರ್ಷಗಳ ಅವಧಿಗೆ ಕೇಂದ್ರ ಮತ್ತು ರಾಜ್ಯಗಳ ನಡುವೆ ತೆರಿಗೆ ಆದಾಯ ಹಾಗೂ ಅನುದಾನಗಳ ಹಂಚಿಕೆಯ ಕುರಿತ ಶಿಫಾರಸುಗಳನ್ನು ಅಂತಿಮಗೊಳಿಸುವ ಮುನ್ನ ರಾಷ್ಟ್ರವ್ಯಾಪಿ ಸಮಾಲೋಚನೆಗಳ ಭಾಗವಾಗಿ ಆಯೋಗ ಮುಂಬೈ ಭೇಟಿ ನೀಡಿದೆ.

**<><*<><>*><>**

ಪ್ರಧಾನಿ ನರೇಂದ್ರ ಮೋದಿ ಅವರು ಬೃಹತ್ ಪ್ರಮಾಣದ ಬದಲಾವಣೆಯಲ್ಲಿ ನಂಬಿಕೆ ಇರಿಸಿರುವ ಮಹಾನ್ ದೂರದೃಷ್ಟಿಯ ನಾಯಕ ಎಂದು ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಶ್ಲಾಘಿಸಿದ್ದಾರೆ. ನವದೆಹಲಿಯ ಉಪರಾಷ್ಟ್ರಪತಿ ಭವನದಲ್ಲಿ ಇಂಡಿಯಾ ಫೌಂಡೇಶನ್ ಆಯೋಜಿಸಿದ್ದ ಕೌಟಿಲ್ಯ ಫೆಲೋಶಿಪ್ ಕಾರ್ಯಕ್ರಮದಲ್ಲಿ ಪಾಲ್ಗೊಂಡವರೊಂದಿಗೆ ಸಂವಾದ ನಡೆಸಿದ ಉಪರಾಷ್ಟ್ರಪತಿ, ದಶಕದ ಆಡಳಿತದ ನಂತರ ಕೇಂದ್ರ ಸರ್ಕಾರ ಸಾಧನೆಗಳು ಗೋಡೆಯ ಮೇಲೆ ದಾಖಲಿಸದ ಬರಹಗಳಿಂತೆವೆ ಎಂದರು. ಭಾರತದ ಚುನಾವಣಾ ಪ್ರಕ್ರಿಯೆಯ ಗಾತ್ರ ಹಾಗೂ ಎಲ್ಲರನ್ನೊಳಗೊಂಡಿರುವುದು ಅದ್ಭುತ ಅಂಶವಾಗಿದ್ದು, ಭಾರತವು ಸಾವಿರಾರು ವರ್ಷಗಳಿಂದ ಪ್ರಜಾಪ್ರಭುತ್ವ ಸ್ಫೂರ್ತಿ ಹೊಂದಿರುವ ರಾಷ್ಟ್ರವಾಗಿದೆ ಎಂದು ಒತ್ತಿ ಹೇಳಿದರು.

**<><*<><>*><>**

ಧರ್ಮಶಾಲದ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**